# ಕೃಷಿಕರಿಗಾಗಿ ರಾಷ್ಟ್ರೀಯ ಮಾರುಕಟ್ಟೆ

ಉದಯವಾಣಿ, Jul 10, 2015, 4:25 PM IST



**ಹುಬ್ಬಳ್ಳಿ:** ಪ್ರತಿ ಕೃಷಿ ಮಾರುಕಟ್ಟೆಗಳ ಮಧ್ಯೆ ಇ-ವ್ಯಾಪಾರ ನಡೆಸಲು ಅನುಕೂಲ ಕಲ್ಪಿಸುವ ಉದ್ದೇಶದಿಂದ ಕೇಂದ್ರ ಸರಕಾರ ಈ ಬಾರಿ ರಾಷ್ಟ್ರೀಯ ಕೃಷಿ ಮಾರುಕಟ್ಟೆ ರೂಪಿಸಲಿದೆ ಎಂದು ಕೇಂದ್ರ ಕೃಷಿ ಸಚಿವ ರಾಧಾಮೋಹನ ಸಿಂಗ್ ಹೇಳಿದರು.

ರಾಜ್ಯ ಕೃಷಿ ಮಾರಾಟ ಇಲಾಖೆಯಿಂದ ನಗರದಲ್ಲಿ ಗುರುವಾರ ಏರ್ಪಡಿಸಿದ್ದ "ಏಕೀಕೃತ ಕೃಷಿ ಮಾರುಕಟ್ಟೆಗಳು- ಕರ್ನಾಟಕ ಮಾದರಿ' ಕುರಿತ ರಾಷ್ಟ್ರಮಟ್ಟದ ಕಾರ್ಯಾಗಾರದಲ್ಲಿ ಮಾತನಾಡಿದ ಅವರು,ರಾಷ್ಟ್ರೀಯ ಕೃಷಿ ಮಾರುಕಟ್ಟೆ ಮೂಲಕ ಮಧ್ಯವರ್ತಿಗಳ ಕಾಟವನ್ನು ನಿವಾರಿಸಿ ರೈತರಿಗೆ ಹೆಚ್ಚು ಲಾಭ ದೊರೆಯುವಂತೆ ಮಾಡಲು ಕೇಂದ್ರ ಸರಕಾರ ಬದ್ಧವಾಗಿದೆ ಎಂದರು.

ರಾಷ್ಟ್ರೀಯ ಮಾರುಕಟ್ಟೆ ಮೂಲಕ ಪ್ರಾರಂಭದಲ್ಲಿ ಮಾರುಕಟ್ಟೆಗಳಷ್ಟೇ ಅಲ್ಲದೇ ಮಾರುಕಟ್ಟೆ ವಿಚಾರದಲ್ಲಿ ರಾಜ್ಯಗಳ ಮಧ್ಯಇರುವ ಗೋಡೆಗಳನ್ನು ತೆರವುಗೊಳಿಸಲಾಗುವುದು. ಮುಂಬರುವ ತಿಂಗಳುಗಳಲ್ಲಿ ಎಲ್ಲ ರಾಜ್ಯಗಳ ಕಾರ್ಯದರ್ಶಿಗಳೊಂದಿಗೆ ಚರ್ಚಿಸಲಾಗುವುದು ಎಂದರು.

ವಿವಿಧ ರಾಜ್ಯಗಳಿಂದ ಈಗಾಗಲೇ ಗುರುತಿಸಿರುವ 585 ಎಪಿಎಂಸಿಗಳಿಗೆ ಸಾಮಾನ್ಯ ವ್ಯಾಪಾರದ ವೇದಿಕೆ ಒದಗಿಸಲಾಗುವುದು. ಇದಕ್ಕಾಗಿ ಪ್ರತಿ ಮಾರುಕಟ್ಟೆಗೆ ಕೇಂದ್ರ ಸರಕಾರದಿಂದ ಹೆಚ್ಚುವರಿಯಾಗಿ 30 ಲಕ್ಷ ರೂ. ಅನುದಾನ ನೀಡಲಾಗುವುದು ಎಂದು ತಿಳಿಸಿದರು.

ಪ್ರತಿ ಕೃಷಿ ಜಮೀನಿಗೆ ನೀರಾವರಿ ಸೌಲಭ್ಯ ಒದಗಿಸುವುದಷ್ಟೇ ಅಲ್ಲ ಮಣ್ಣು ಪರೀಕ್ಷೆ ಮಾಡಿಸುವುದು ಕೇಂದ್ರ ಸರಕಾರದ ಉದ್ದೇಶ. ಕಳೆದ ಹತ್ತು ವರ್ಷಗಳಿಂದ ರೈತರ ಜಮೀನಿಗೆ ನೀರಾವರಿ ಸೌಲಭ್ಯ ಒದಗಿಸುವುದಕ್ಕಾಗಿ ಕೇಂದ್ರ ಸರಕಾರದಿಂದ ಸಾವಿರಾರು ಕೋಟಿ ರೂ. ಹಣ ನೀರಿನಂತೆ ಹರಿದರೂ ಸೌಲಭ್ಯ ದೊರೆತಿಲ್ಲ. ಆದರೆ ಈ ಬಾರಿ ನೀರಾವರಿ ಸೌಲಭ್ಯ ಒದಗಿಸುವ ಉದ್ದೇಶದಿಂದ ಜಿಲ್ಲಾ ನೀರಾವರಿ ಯೋಜನೆ ರಚಿಸಲು ಸರಕಾರ ನಿರ್ಧರಿಸಿದೆ.

ಈ ಯೋಜನೆಯ ನಿಯಮಾವಳಿಗಳನ್ನು ಈಗಾಗಲೇ ರಾಜ್ಯ ಸರಕಾರಗಳಿಗೆ ತಲುಪಿಸಲಾಗಿದೆ ಎಂದರು. ಕೃಷಿ ವಿಜ್ಞಾನ ಕೇಂದ್ರಗಳಿಗೆ ಅಗತ್ಯ ಸೌಲಭ್ಯ ಒದಗಿಸಲು ಸರಕಾರ ಬದ್ಧವಾಗಿದೆ. ಪ್ರತಿ ಕೃಷಿ ಜಮೀನಿಗೆ ನೀರೊದಗಿಸುವುದು, ಮಣ್ಣು ಪರೀಕ್ಷೆ, ಕೃಷಿ ಸಾಮಗ್ರಿ ಹಾಗೂ ಮಾರುಕಟ್ಟೆ ಒದಗಿಸುವುದು ಮೋದಿ ಸರಕಾರದ ಪ್ರಮುಖ ಆದ್ಯತೆ. ಕಳೆದೊಂದು ವರ್ಷದಲ್ಲಿ ಮಣ್ಣು ಪರೀಕ್ಷೆಗಾಗಿಯೇ ಕೋಟ್ಯಂತರ ರೂ.ಗಳನ್ನು ಸರಕಾರ ವ್ಯಯಿಸಿದೆ.

ಮಣ್ಣು ಪರೀಕ್ಷೆಗೆ ಕೇಂದ್ರ ಸರಕಾರ ನೀಡುವ ಅನುದಾನದಲ್ಲಿ ರಾಜ್ಯಗಳು ಪ್ರಯೋಗಾಲಯಗಳನ್ನು ನಿರ್ಮಿಸಬೇಕು. ಪ್ರತಿ ಜಮೀನಿನ ಮಣ್ಣು ಪರೀಕ್ಷೆ ಮಾಡಿ ಗುರುತಿನ ಚೀಟಿಯನ್ನು ರೈತರಿಗೆ ನೀಡಬೇಕು. ರಾಸಾಯನಿಕ ಗೊಬ್ಬರಗಳ ಅತಿಯಾದ ಉಪಯೋಗದಿಂದಾಗಿ ಈಗಾಗಲೇ ಹೆಚ್ಚಿನ ಜಮೀನಿನ ಮಣ್ಣು ಬಿತ್ತನೆಗೆ ಅಯೋಗ್ಯವಾಗಿದ್ದು, ಮಣ್ಣು ಪರೀಕ್ಷೆ ಮೂಲಕ ಮಣ್ಣಿನ ಆರೋಗ್ಯ ಮರಳಿ ಪಡೆಯಬೇಕು. ರೈತನ ಹೆಸರಿನಲ್ಲಿ ರಾಜಕಾರಣ ಮಾಡುವ ಮೂಲಕ ದೇಶದ ಭವಿಷ್ಯದೊಂದಿಗೆ ಚೆಲ್ಲಾಟವಾಡುವುದನ್ನು ರಾಜಕಾರಣಿಗಳು ಬಿಡಬೇಕು ಎಂದು ಸಲಹೆ ನೀಡಿದರು.